ಆ) ಕ್ರಿಯಾ ಯೋಜನೆಯನ್ನು ತಯಾರಿಸಲು ಸ್ಥಳೀಯ ಶಾಸಕರ ಸಹಮತಿ ಅವಶ್ಯಕತೆ ಇರುತ್ತದೆ. ಅದರಂತೆ ಸ್ಥಳೀಯ ಶಾಸಕರು ಕಾಮಗಾರಿ ಪಟ್ಟಿಯನ್ನು ಕ್ರಿಯಾ ಯೋಜನೆಯಲ್ಲಿ ಅಳವಡಿಸಲು ನೀಡಿರುತ್ತಾರೆ. ಅದನ್ನು ಉಪ ವಿಭಾಗಾಧಿಕಾರಿಗಳು ಚಿಕ್ಕೋಡಿ ಇವರು ಪರಿಶೀಲನೆ ಮಾಡಿ ಕ್ರಿಯಾ ಯೋಜನೆಯನ್ನು ಮಾರ್ಪಾಡು ಮಾಡಿ ಸಲ್ಲಿಸಿರುತ್ತಾರೆ. ಅದನ್ನು ಜಿಲ್ಲಾ ಉಸ್ತುವಾರಿ ಸಚಿವರ ಅನುಮೋದನೆ ಪಡೆದು, ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ ಇವರ ಶಿಫಾರಸ್ಸಿನಂತೆ ರೂ.410.00 ಲಕ್ಷಗಳ ಕ್ರಿಯಾ ಯೋಜನೆಗೆ ಸರ್ಕಾರವು ದಿನಾಂಕ: 15–12–2009 ರಂದು ಅನುಮೋದನೆ ನೀಡಿ ಆದೇಶಿಸಿದೆ. ಹಾಗೂ ರೂ.90.00 ಲಕ್ಷಗಳ ಕ್ರಿಯಾ ಯೋಜನೆಯ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳಿಂದ ನಿರೀಕ್ಷಿಸಲಾಗಿದೆ.

ಬೆಳಗಾವಿ ಜಿಲ್ಲೆಯಲ್ಲಿ ವಾರ್ಡ್‌ಗಳ ಮರುವಿಂಗಡಣೆ

201 (430) ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಚಿಕ್ಕೋಡಿ ಸದಲಗ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕ್, ಸದಲಗ ಪಟ್ಟಣ ಪಂಚಾಯಿತಿಯಲ್ಲಿರುವ ಜನಸಂಖ್ಯೆ ಎಷ್ಟು;

ಆ) ಈ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಹಿಂದೆ ಇದ್ದ ವಾರ್ಡಗಳ ಸಂಖ್ಯೆ ಎಷ್ಟು; ವಾರ್ಡಗಳ ಪುನರ್ ವಿಂಗಡಣೆಯಾದ ನಂತರ ಇರುವ ವಾರ್ಡಗಳ ಸಂಖ್ಯೆ ಎಷ್ಟು, ವಾರ್ಡವಾರು ವಿವರ ನೀಡುವುದು, ಈ ಮರುವಿಂಗಡಣೆ ಕಾರ್ಯಕ್ಕೆ ಎಷ್ಟು ವೆಚ್ಚ ಮಾಡಲಾಗಿದೆ;

ಇ) ಅವೈಜ್ಞಾನಿಕವಾಗಿ ವಾರ್ಡ ಮರುವಿಂಗಡಣೆಗೆ ಖರ್ಚು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದರೆ ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಸ್. ಬಾಲಚಂದ್ರ ಜಾರಕಿ ಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) 2001ರ ಜನಗಣತಿಯನ್ವಯ ಒಟ್ಟು ಜನಸಂಖ್ಯೆ 20,202

ಆ)

1. ಹಿಂದೆ ಇದ್ದ ವಾರ್ಡಗಳ ಸಂಖ್ಯೆ. 16

2. ಪುನರ್ ವಿಂಗಡಣೆ ನಂತರ ವಾರ್ಡಗಳ ಸಂಖ್ಯೆ.20
3. ಪುನರ್ ವಿಂಗಡಣೆ ಕಾರ್ಯದ ವೆಚ್ಚ ರೂ.64,615/-

ಇ) ಇಲ್ಲ.
ಈ) ಉದ್ಭವಿಸುವುದಿಲ್ಲ.

ಮಸ್ಕಿ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಗೆ ಪರಿವರ್ತಿಸುವುದು

202 (295) ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಮಸ್ಕಿ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಗಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಶ್ರೀ ಎಸ್. ಬಾಲಚಂದ್ರ ಜಾರಕಿ ಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು) : -

ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರು ಕರ್ನಾಟಕ ಪುರಸಭೆ ಕಾಯ್ದೆ, 1964ರ ಕಲಂ 3 ಮತ್ತು 349 ರನ್ವಯ ಹಾಗೂ 2001ರ ಜನಗಣತಿಯನ್ವಯ 10,000ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಒಟ್ಟು 247 ಗ್ರಾಮ ಪಂಚಾಯಿತಿಗಳ ಪಟ್ಟಿ ಮಾಡಿ ಮೇಲ್ದರ್ಜೆಗೇರಿಸುವ ಬಗ್ಗೆ ನಗರಾಭಿವೃದ್ಧಿ ಇಲಾಖೆಯ ಅಭಿಪ್ರಾಯ ಕೋರಿದ್ದು, ಸದರಿ ಪಟ್ಟಿಯಲ್ಲಿ ಮಸ್ಕಿ ಗ್ರಾಮ ಪಂಚಾಯತಿಯೂ ಸೇರಿದೆ.

ಆದರೆ, ಕಂದಾಯ ಇಲಾಖೆಯ ಆದೇಶ ಸಂಖ್ಯೆ:ಆರ್‌ಡಿ 70 ಭೂದಪು 2009 ದಿನಾಂಕ: 24.12.2009 ರಲ್ಲಿ ಕರ್ನಾಟಕ ರಾಜ್ಯದಲ್ಲಿ 2011ರ ಜನಗಣತಿಯ ಕಾರ್ಯವು ಪ್ರಗತಿಯಲ್ಲಿರುವುದರಿಂದ ದಿನಾಂಕ: 31.03.2011 ರವರೆಗೆ ಯಾವುದೇ ಪ್ರದೇಶವನ್ನು ಮೇಲ್ದರ್ಜೆಗೇರಿಸದಂತೆ ನಿರ್ಭಂದಿಸಲಾಗಿದೆ. ಆದ್ದರಿಂದ ದಿನಾಂಕ 31.03.2010ರ ನಂತರ ಸದರಿ ವಿಷಯದ ಬಗ್ಗೆ ನಗರಾಭಿವೃದ್ಧಿ ಇಲಾಖೆಯು ಆರ್ಥಿಕ ಹಾಗೂ ಆಡಳಿತಾತ್ಮಕ ನಿರ್ಣಯವನ್ನು ತೆಗೆದುಕೊಳ್ಳಲಾಗುವುದು.